85) ಜೇವರ್ಗಿ
86) ಸೇಡಂ
87) ಶಹಾಪುರ
88) ಯಾದಗಿರಿ

---

782 (1001) ಶ್ರೀ ಪಾಟೀಲ್ ಎಂ ವೈ (ಅಫ್ಜಲ್‌ಪುರ್) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರೈತನಿಗೆ ಕೃಷಿ ಮಾಡಲು ಜಾನುವಾರುಗಳು ಅತಿ ಮುಖ್ಯವಾಗಿರುವುದು ಸರ್ಕಾರದ ಗಮನದಲ್ಲಿದೆಯೇ ,

ಆ) ಪ್ರಕೃತಿ ವಿಕೋಪ ಹಾಗೂ ಸಿಡಿಲು ಬಡಿದು ಜಾನುವಾರುಗಳು ಸತ್ತರೆ ಸಿ ಆರ್ ಎಫ್ ಮುಖಾಂತರ ಪರಿಹಾರ ನೀಡುವ ಯೋಜನೆ ಜಾರಿಯಲ್ಲಿದೆಯೇ,

ಇ) ಹಾಗಿಲ್ಲದಿದ್ದಲ್ಲಿ, ಅದನ್ನು ಸ್ಥಗಿತಗೊಳಿಸದ್ದಕ್ಕೆ ಕಾರಣಗಳೇನು ,

ಈ) ಕೇಂದ್ರ ಸರ್ಕಾರ ಸ್ಥಗಿತಗೊಳಿಸಿದರೆ ರಾಜ್ಯ ಸರ್ಕಾರ ಈ ಪರಿಹಾರ ಕೊಡುವ ಯೋಜನೆಯನ್ನು ರೂಪಿಸಿದೆಯೇ ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಹೌದು

ಆ) ಇಲ್ಲ

ಇ) ಮೊದಲಿನಿಂದಲೂ ಈ ಯೋಜನೆ ಜಾರಿಯಲ್ಲಿರುವುದಿಲ್ಲ

ಈ) ಇಲ್ಲ

783 (1002) ಶ್ರೀ ಪಾಟೀಲ್ ಎಂ ವೈ (ಅಫ್ಜಲಪುರ) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಫಜಲಪೂರ ನಗರದಲ್ಲಿರುವ ಕಂದಾಯ ಇಲಾಖೆಯ ಕಟ್ಟಡಕ್ಕೆ ಹೊಂದಿಕೊಂಡಂತಿರುವ ನೀರಾವರಿ ಇಲಾಖೆಯವರು ಖಾಸಗಿ ಜಮೀನನ್ನು ವಶಪಡಿಸಿಕೊಂಡ ಜಮೀನಿನ ವಿಸ್ತೀರ್ಣವೆಷ್ಟು ,

ಆ) ಈ ಎಲ್ಲಾ ಜಮೀನು ಸರ್ಕಾರದ ಸ್ವಾಧೀನದಲ್ಲಿದೆಯೇ ,

ಇ) ಈ ಬೆಲೆ ಬಾಳುವ ಜಮೀನು ಒತ್ತುವರಿಯಾಗಿದ್ದು, ಇದನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)

ಅ) ಅಫಜಲಪೂರ ನಗರದಲ್ಲಿರುವ ಅಫಜಲಪೂರ ಕೆರೆಯ ಟೇಲ್ ಚಾನಲ್‌ಗಾಗಿ 6 ಎಕರೆ 22 ಗುಂಟೆ ಖಾಸಗಿ ಜಮೀನನ್ನು ಭೂಸ್ವಾದೀನ ಪಡಿಸಿಕೊಳ್ಳಲಾಗಿದೆ

ಆ) ಇದರಲ್ಲಿ 6 ಎಕರೆ ಜಮೀನು ಸರ್ಕಾರದ ಸ್ವಾಧೀನದಲ್ಲಿದ್ದು, ಇನ್ನುಳಿದ 22 ಗುಂಟೆ ಜಮೀನನ್ನು ಖಾಸಗಿಯವರು ಅತಿಕ್ರಮಿಸಿರುತ್ತಾರೆ

ಇ) ಅತಿಕ್ರಮಣದಾರರು ಅಫಜಲಪೂರ ನ್ಯಾಯಾಲಯದಲ್ಲಿ ವ್ಯಾಜ್ಯ ಹೂಡಿರುವುದರಿಂದ, ಒತ್ತುವರಿಯಾಗಿರುವ ಜಮೀನು ತೆರವುಗೊಳಿಸುವ ಪ್ರಕರಣ ನ್ಯಾಯಾಲಯದಲ್ಲಿದೆ

784 (1003) ಶ್ರೀ ಪಾಟೀಲ್ ಎಂ ವೈ (ಅಫ್ಜಲಪುರ) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಫಜಲಪೂರ ಮತಕ್ಷೇತ್ರದಲ್ಲಿ ಕೆರೆಗಳ ಸಂಖ್ಯೆಗಳೆಷ್ಟು ಹಾಗೂ ಆ ಕೆರೆಗಳ ಮುಖಾಂತರ ಎಷ್ಟು ಎಕರೆ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ ,

ಆ) ಆ ಕ್ಷೇತ್ರದ ಕೆರೆಗಳು ತುಂಬದೇ ಇದ್ದ ವಕ್ಷದಲ್ಲಿ ಹತ್ತಿರದಲ್ಲಿ ಹರಿಯುತ್ತಿರುವ ಭೀಮಾ ನದಿಯಿಂದ ಈ ಕೆರೆಗಳಿಗೆ ನೀರು ತುಂಬಿಸುವ ಕೆಲಸವನ್ನು ಸರ್ಕಾರ ಕೈಗೆತ್ತಿಕೊಳ್ಳುವುದೇ ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)

ಅ) ಅಫಜಲಪೂರ ಮತಕ್ಷೇತ್ರದಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಡಿ 8 ಕೆರೆಗಳು ಅಸ್ತಿತ್ವದಲ್ಲಿರುತ್ತವೆ 2000–2001ನೇ ಸಾಲಿನಲ್ಲಿ ಈ ಕೆರೆಗಳಿಂದ 254 30 ಹೆಕ್ಟೇರ್ ಜಮೀನಿಗೆ ನೀರಾವರಿ ಸೌಲಭ್ಯ ಕಲ್ಪಿಸಿದ್ದು, ನಂತರದ ವರ್ಷಗಳಲ್ಲಿ ಮಳೆ ಬಾರದೆ ಈ ಕೆರೆಗಳು ತುಂಬದೇ ಇದ್ದ ಕಾರಣ, ಯಾವುದೇ ನೀರಾವರಿ ಸೌಲಭ್ಯ ಕಲ್ಪಿಸಲು ಸಾಧ್ಯವಾಗಿಲ್ಲ

ಆ) ತಾಂತ್ರಿಕ ಶಕ್ಯತೆ ಹಾಗೂ ಅನುದಾನದ ಲಭ್ಯತೆಯ ಆಧಾರದ ಮೇಲೆ ಪರಿಶೀಲಿಸಲಾಗುವುದು

785 (349) ಶ್ರೀ ಎಸ್ ಎಸ್ ಪಾಟೀಲ್ (ಮುಂಡರಗಿ) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮುಂಡರಗಿ ತಾಲೂಕು ಡಂಬಳ ನೀರಾವರಿ ಕೆರೆಯ ನೂತನ ಬಲದಂಡೆ ಕಾಲುವೆಯ ಕೆಲಸ ಪ್ರಾರಂಭವಾದ ದಿನಾಂಕ ತಿಳಿಸುವುದು ,

ಆ) ಪ್ರಾರಂಭದಲ್ಲಿ ಈ ಕಾಲುವೆಯ ಅಂದಾಜು ಮೊತ್ತ ಎಷ್ಟಿತ್ತು , ಇಲ್ಲಿಯವರೆಗೆ ಖರ್ಚಾದ ಹಣವೆಷ್ಟು ,

ಇ) ಈ ಕಾಲುವೆಯ ಕಾಮಗಾರಿ ಮುಗಿದು ರೈತರಿಗೆ ನೀರಾವರಿ ಮಾಡಲು ಎಷ್ಟು ವರ್ಷ ಬೇಕಾಗುತ್ತದೆ ?